# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 178 |
| ಸದಸ್ಯರ ಹೆಸರು | ಶ್ರೀ. ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 18-08-2026 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಯಾದಗಿರಿ ಜಿಲ್ಲೆಯ ವಿವಿಧ ಅಗ್ರೋ ಏಜೆನ್ಸಿಗಳಲ್ಲಿ ಯೂರಿಯಾ ಹಾಗೂ ಡಿ.ಎ.ಪಿ ಸೇರಿದಂತೆ ಇನ್ನಿತರ ರಸಗೊಬ್ಬರಗಳು ಸರ್ಕಾರ ನಿಗಧಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಪ್ರಸಕ್ತ ಸಾಲಿನಲ್ಲಿ ಯಾದಗಿರಿ ಜಿಲ್ಲೆಯಲ್ಲಿ ಯೂರಿಯಾ, ಡಿ.ಎ.ಪಿ ಹಾಗೂ ಇತರೆ ರಸಗೊಬ್ಬರಗಳನ್ನು ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಾಟ ಸಂಬಂಧ ಮೌಖಿಕವಾಗಿ ಸಲ್ಲಿಕೆಯಾಗಿದ್ದ ದೂರುಗಳಿಗೆ ಕೂಲಂಕಷವಾಗಿ ಪರಿಶೀಲಿಸಲಾಗಿ, ಶ್ರೀ. ದಂಡಗುಂಡ ಬಸವೇಶ್ವರ ಆಗ್ರೋ ಏಜೆನ್ಸಿ, ಕುರಕುಂದ, ಶಹಾಪೂರ ತಾಲ್ಲೂಕುರವರು ರಸಗೊಬ್ಬರಗಳನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡಿರುವುದು ಕಂಡುಬಂದಿರುತ್ತದೆ. ಈ ಸಂಬಂಧ ಸದರಿಯವರಿಗೆ ನೋಟೀಸನ್ನು ಜಾರಿ ಮಾಡಿ ಚಿಲ್ಲರೆ ರಸಗೊಬ್ಬರ ಮಾರಾಟ ಪರವಾನಗಿಯನ್ನು ದಿನಾಂಕ 31.07.2026ರಂದು ಅಮಾನತ್ತುಗೊಳಿಸಲಾಗಿದ್ದು, ರಸಗೊಬ್ಬರ ನಿಯಂತ್ರಣ ಆದೇಶ, 1985ರ ಪ್ರಕಾರ ಮುಂದಿನ ಕ್ರಮವಹಿಸಲಾಗುತ್ತಿದೆ.<br><br>ರಸಗೊಬ್ಬರಗಳನ್ನು ಹೆಚ್ಚಿನ ದರಕ್ಕೆ ಮಾರಾಟ ಅಥವಾ ರಸಗೊಬ್ಬರ ನಿಯಂತ್ರಣ ಆದೇಶ, 1985ರ ಉಲ್ಲಂಘನೆಗಳನ್ನು ತಡೆಗಟ್ಟಲು ಈ ಕೆಳಗಿನ ಕ್ರಮಗಳನ್ನು ಕೈಗೊಳ್ಳಲಾಗಿದೆ<br>• ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆರವರ ಸುಪರ್ದಿಯಲ್ಲಿ ಅಪರ ಕೃಷಿ ನಿರ್ದೇಶಕರು (ಜಾಗೃತ ಕೋಶ) ಮತ್ತು ರಾಜ್ಯದ 4 ಕಂದಾಯ ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು (ಜಾಗೃತ ಕೋಶ) ಸೃಜಿಸಲಾಗಿದೆ.<br>• ಜಾಗೃತ ಕೋಶದ ಅಧಿಕಾರಿಗಳು ಹಾಗೂ ಜಿಲ್ಲೆಯ ರಸಗೊಬ್ಬರ ಪರಿವೀಕ್ಷಕರು ಅವರುಗಳ ವ್ಯಾಪ್ತಿಯಲ್ಲಿ ದೂರುಗಳನ್ನು ಆಧರಿಸಿ/ ಅನಿರೀಕ್ಷಿತವಾಗಿ |

| | | |
|---|---|---|
| | | /ಆಗಿಂದ್ದಾಗ್ಗೆ ಅವರ ವ್ಯಾಪ್ತಿಯಲ್ಲಿನ ಚಿಲ್ಲರೆ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ ಪರಿಶೀಲಿಸಿ, ರಸಗೊಬ್ಬರಗಳನ್ನು ಹೆಚ್ಚಿನ ದರಕ್ಕೆ ಮಾರಾಟ/ಕಾಳಸಂತೆ/ಕೃತಕ ಅಭಾವ ಸೃಷ್ಟಿಸುವುದು / ಕೃಷಿಯೇತರ ಚಟುವಟಿಕೆಗಳಿಗೆ ಬಳಸುವುದು ಅಥವಾ ಇತರೆ ಉಲ್ಲಂಘನೆಗಳು ಕಂಡುಬಂದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. |
| ಆ) | ಈ ಮೇಲ್ಕಂಡ ಜಿಲ್ಲೆಗಳಲ್ಲಿ ಸಮರ್ಪಕ ಮಳೆಯಾಗದ ಕಾರಣ ಈಗಾಗಲೇ ರೈತರು ಸಂಕಷ್ಟದಲ್ಲಿದ್ದು, ಇಂತಹ ಸಂದರ್ಭದಲ್ಲಿ ಅಗತ್ಯ ರಸಗೊಬ್ಬರಗಳನ್ನು ದುಬಾರಿ ಬೆಲೆಗೆ ಅಕ್ರಮ ಮಾರಾಟ ಮಾಡಲು ಸಹಕರಿಸಿದ ಅಧಿಕಾರಿಗಳು ಯಾರು ಎಂದು ಸರ್ಕಾರ ಪತ್ತೆ ಹಚ್ಚಿದೆಯೇ: ಪತ್ತೆ ಹಚ್ಚಿದಲ್ಲಿ, ಅಧಿಕಾರಿಗಳು ಹಾಗೂ ವ್ಯಾಪಾರಸ್ಥರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಪ್ರಸಕ್ತ ಸಾಲಿನಲ್ಲಿ ರಸಗೊಬ್ಬರಗಳನ್ನು ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಾಟ ಸಂಬಂಧ ಯಾದಗಿರಿ ಜಿಲ್ಲೆಯಲ್ಲಿ ಒಂದು ಚಿಲ್ಲರೆ ರಸಗೊಬ್ಬರ ಮಾರಾಟ ಪರವಾನಗಿಯನ್ನು ಅಮಾನತ್ತುಗೊಳಿಸಲಾಗಿದೆ.<br><br>ಜಿಲ್ಲೆಯಲ್ಲಿ ಯಾವುದೇ ಅಧಿಕಾರಿಗಳು ಹೆಚ್ಚಿನ ದರದಲ್ಲಿ ರಸಗೊಬ್ಬರವನ್ನು ಮಾರಾಟ ಮಾಡಲು ಸಹಕರಿಸಿರುವುದು ವರದಿಯಾಗಿರುವುದಿಲ್ಲ. |

ಸಂಖ್ಯೆ: AGRI/198/ACT/2026

P. M. Narendraswamy

**(ಪಿ. ಎಂ. ನರೇಂದ್ರ ಸ್ವಾಮಿ)**

ಕೃಷಿ ಸಚಿವರು